ಕರ್ನಾಟಕ ಸರ್ಕಾರ

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

ಬೆಂಗಳೂರು

**ಸಂಖ್ಯೆ:** ಇಡಿ/ಕೆಇಎ/ಆಡಳಿತ/ಸಿ.ಆರ್.03/2023–24 (ಕೆಕೆ) **ದಿನಾಂಕ: 05.02.2024**

**ಸಂಖ್ಯೆ:** ಇಡಿ/ಕೆಇಎ/ಆಡಳಿತ/ಸಿ.ಆರ್.03/2023–24 (ಆರ್‌ಪಿಸಿ) **ದಿನಾಂಕ: 05.02.2024**

# ನೇಮಕಾತಿ ಅಧಿಸೂಚನೆ

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು ಇಲ್ಲಿ ಖಾಲಿ ಇರುವ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ (ಸ್ಥಳೀಯ) ವೃಂದದಲ್ಲಿರುವ 50 ಸಹಾಯಕ ಅಭಿಯಂತರರು (ಸಿವಿಲ್) ಹಾಗೂ 14 'ಸಿ' ಗ್ರೂಪ್ ವೃಂದದ ಹುದ್ದೆಗಳಿಗೆ ನೇರ ನೇಮಕಾತಿ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

| ಕ್ರ. ಸಂ. | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು | ವೇತನ ಶ್ರೇಣಿ | ಒಟ್ಟು ಹುದ್ದೆ | ಮೂಲ ವೃಂದ | ಕಲ್ಯಾಣ ಕರ್ನಾಟಕ ವೃಂದ |
|---|---|---|---|---|---|
| 1 | ಸಹಾಯಕ ಇಂಜಿನಿಯರ್ (ಸಿವಿಲ್) | 43100–83900 | 50 | 43 | 07 |
| 2 | ಪ್ರಥಮ ದರ್ಜೆ ಲೆಕ್ಕ ಸಹಾಯಕರು (ಗ್ರೂಪ್–ಸಿ) | 27650–52650 | 14 | 11 | 03 |
| **ಒಟ್ಟು** | | | **64** | **54** | **10** |

1. **ಶೈಕ್ಷಣಿಕ ವಿದ್ಯಾರ್ಹತೆ**

**1.1 ಸಹಾಯಕ ಇಂಜಿನಿಯರ್ (ಸಿವಿಲ್):**

ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯದಿಂದ BE/B.Tech ಇಂಜಿನಿಯರಿಂಗ್ ಪದವಿಯನ್ನು ಸಿವಿಲ್ ವಿಭಾಗದಲ್ಲಿ ಪಡೆದಿರಬೇಕು.

**(ಸೂಚನೆ: ಅಂಚೆ ಮತ್ತು ದೂರ ಶಿಕ್ಷಣ ಮುಖಾಂತರ ಪಡೆದ ತಾಂತ್ರಿಕ ಪದವಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.)**

**1.2 ಪ್ರಥಮ ದರ್ಜೆ ಲೆಕ್ಕ ಸಹಾಯಕರು:**

ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯದಿಂದ ಬಿ.ಕಾಂ ಪದವಿ ಪಡೆದಿರಬೇಕು.

2 **ಪಿಂಚಣಿ ಸೌಲಭ್ಯ: ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 4 ಪಿಇಟಿ 2005, ದಿನಾಂಕ: 31.3.2006 ರಂತೆ.**

3 **ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು;

| **ಅಭ್ಯರ್ಥಿಗಳು** | **ಗರಿಷ್ಠ ವಯೋಮಿತಿ** |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷಗಳು |
| ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | 38 ವರ್ಷಗಳು |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ–1 ಅಭ್ಯರ್ಥಿಗಳಿಗೆ | 40 ವರ್ಷಗಳು |

ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 3 (6) ರಲ್ಲಿ ನಿಗಧಿಪಡಿಸಿರುವಂತೆ ನಿಗದಿತ ಗರಿಷ್ಠ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

4 **ಹುದ್ದೆಗಳ ವರ್ಗೀಕರಣ: ಈ ಅಧಿಸೂಚನೆಯ ಕೊನೆಯಲ್ಲಿ ಪ್ರಕಟಿಸಲಾಗಿದೆ.**

5 **ಅರ್ಜಿ ಸಲ್ಲಿಸುವ ವಿಧಾನ:** ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ತೋರಿಸುವ **ಲಿಂಕ್** ಅನ್ನು ಆಯ್ಕೆ ಮಾಡಿ ಆನ್ ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಪ್ರತ್ಯೇಕ ಅರ್ಜಿಯಲ್ಲಿ ಸಲ್ಲಿಸಬೇಕು, ಆದರೆ ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸಬೇಕು.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 10/02/2024 |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 10/03/2024 |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | 14/03/2024 |

ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಯಾವುದೇ ಸಮಯದಲ್ಲಿಯಾದರೂ ಅಭ್ಯರ್ಥಿತನವು ರದ್ದುಗೊಳ್ಳುವುದು ಹಾಗು ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರವು / ಪ್ರಾಧಿಕಾರ / ಸಂಸ್ಥೆಯು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

6 **ಶುಲ್ಕ:** ಆನ್ ಲೈನ್ ಮೂಲಕ ಶುಲ್ಕ ಪಾವತಿಸಬಹುದಾಗಿರುತ್ತದೆ.

| ವಿವರಗಳು | ಶುಲ್ಕ | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ–2ಎ / 2ಬಿ / 3ಎ / 3ಬಿ) | ರೂ. 750/– | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಮಾಜಿ ಸೈನಿಕ ಮತ್ತು ವಿಕಲ ಚೇತನ ಅಭ್ಯರ್ಥಿಗಳು | ರೂ. 500/– | |

ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ. (ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವವರು ಮತ್ತು ಅದಕ್ಕೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಹೊಂದಿರುವವರು)

7 **ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:**

ಮೇಲ್ಕಂಡ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್– ಒಎಂಆರ್ ಮಾದರಿ (Offline-OMR type) ಮೂಲಕ ಪರೀಕ್ಷೆ ನಡೆಸಲಾಗುವುದು.

**ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬೆಂಗಳೂರು, ಮೈಸೂರು, ದಕ್ಷಿಣ ಕನ್ನಡ, ದಾವಣಗೆರೆ, ಧಾರವಾಡ, ಶಿವಮೊಗ್ಗ ಮತ್ತು ತುಮಕೂರು** ಕೇಂದ್ರಗಳಲ್ಲಿ ನಡೆಸಲಾಗುವುದು. ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪತ್ರಿಕೆಗಳಲ್ಲಿ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನ ಪರವಾನಗಿ / ಆಧಾರ್‌ಕಾರ್ಡ್ / ಪಾಸ್ಪೋರ್ಟ್ / ವೋಟರ್ ಐಡಿ/ ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.

7.1 **ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ:**

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯು ವಿವರಣಾತ್ಮಕ ಪತ್ರಿಕೆಯಾಗಿದ್ದು, ಗರಿಷ್ಠ 150 ಅಂಕಗಳನ್ನು ಒಳಗೊಂಡಿರುತ್ತದೆ ಮತ್ತು ಅಭ್ಯರ್ಥಿಗಳು ಇದರಲ್ಲಿ ಅರ್ಹತೆ ಗಳಿಸಲು ಕನಿಷ್ಠ 50 ಅಂಕಗಳನ್ನು ಗಳಿಸತಕ್ಕದ್ದು. ಕನಿಷ್ಠ 50 ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆಗೆ ಅರ್ಹರಾಗುವುದಿಲ್ಲ.

ಆದರೆ ಮೇಲೆ ತಿಳಿಸಿರುವ ಹುದ್ದೆಗಳಿಗೆ ಅರ್ಜಿಯನ್ನು ಸಲ್ಲಿಸುವ ಅಭ್ಯರ್ಥಿಗಳು, ಎಸ್.ಎಸ್.ಎಲ್.ಸಿ/10ನೇ ತರಗತಿ, ಪಿಯುಸಿ ಅಥವಾ ಮೇಲ್ಪಟ್ಟ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ (ಪ್ರಥಮ ಭಾಷೆ) ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿದ್ದಲ್ಲಿ, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದುವುದರಿಂದ ವಿನಾಯಿತಿ ಹೊಂದಿರುತ್ತಾರೆ
**(ಕಡ್ಡಾಯ ಕನ್ನಡ ಭಾಷಾ ಪರೀಕ್ಷಯಲ್ಲಿ ಪಡೆದ ಅಂಕಗಳನ್ನು ಹುದ್ದೆಗಳ ಆಯ್ಕೆಗೆ ಪರಿಗಣಿಸುವುದಿಲ್ಲ)**

7.2 **ಸಹಾಯಕ ಇಂಜಿನಿಯರ್ (ಸಿವಿಲ್)**

| ಪತ್ರಿಕೆ/ Paper | ವಿಷಯ / Subject | ಅಂಕಗಳು/ Marks | ಅವಧಿ/Duration (ಗಂಟೆ / hours) |
|---|---|---|---|
| **ಪತ್ರಿಕೆ–1** | ಸಾಮಾನ್ಯ ಪತ್ರಿಕೆ (General Paper- ಪ್ರಚಲಿತ ವಿದ್ಯಮಾನಗಳು, ಸಾಮಾನ್ಯ ವಿಜ್ಞಾನ, ಕರ್ನಾಟಕ ಇತಿಹಾಸ ಮತ್ತು ಭೂಗೋಳ ಶಾಸ್ತ್ರ, ಭಾರತದ ಇತಿಹಾಸ, ಭಾರತದ ಭೂಗೋಳ ಶಾಸ್ತ್ರ, ಸಮಾಜ ವಿಜ್ಞಾನ, ಸಾಮಾನ್ಯ ಬೌದ್ಧಿಕ ಸಾಮರ್ಥ್ಯಕ್ಕೆ ಸಂಬಂಧಿಸಿದ ಸಾಮಾನ್ಯ ಜ್ಞಾನದ ವಿಷಯಗಳು, ದೈನಂದಿನ ಗ್ರಹಿಕೆಯ ವಿಷಯಗಳು) | 100 | 2 ಗಂಟೆ |
| **ಪತ್ರಿಕೆ–2** | ನಿರ್ದಿಷ್ಟ ಪತ್ರಿಕೆ (Specific Paper) | 100 | 2 ಗಂಟೆ |

**(ಸಹಾಯಕ ಇಂಜಿನಿಯರ್ (ಸಿವಿಲ್) ಹುದ್ದೆಗಳ ನಿರ್ದಿಷ್ಟ ಪತ್ರಿಕೆ (Specific Paper) ಪಠ್ಯ ಕ್ರಮ – ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರು ಬಿ.ಇ (ಸಿವಿಲ್) ಪದವಿ ಪರೀಕ್ಷೆಗೆ ನಿಗದಿಪಡಿಸಿದ ಪಠ್ಯಕ್ರಮ)**

7.3 **ಪ್ರಥಮ ದರ್ಜೆ ಲೆಕ್ಕ ಸಹಾಯಕರು**

| ಪತ್ರಿಕೆ/ Paper | ವಿಷಯ / Subject | ಅಂಕಗಳು/ Marks | ಅವಧಿ / Duration (ಗಂಟೆ / hours) |
|---|---|---|---|
| **ಪತ್ರಿಕೆ–1** | (ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ವಿಷಯಗಳ ಸಾಮಾನ್ಯ ಜ್ಞಾನ (ಬಿ) ಸಾಮಾನ್ಯ ವಿಜ್ಞಾನ ವಿಷಯಗಳು. (ಸಿ) ಭೂಗೋಳ ಶಾಸ್ತ್ರ ವಿಷಯಗಳು. (ಡಿ) ಸಮಾಜ ವಿಜ್ಞಾನ ವಿಷಯಗಳು. (ಇ) ಭಾರತೀಯ ಸಮಾಜ ಮತ್ತು ಅದರ ಬೆಳವಣಿಗೆಗಳ ಇತಿಹಾಸದ ವಿಷಯಗಳು. (ಎಫ್) ಭಾರತದ ಮತ್ತು ಕರ್ನಾಟಕ ಇತಿಹಾಸ. (ಜಿ) ಭಾರತದ ಸಂವಿಧಾನದ ಮತ್ತು ಸಾರ್ವಜನಿಕ ಆಡಳಿತ. (ಎಚ್) ಪ್ರಾಯೋಗಿಕ ಜ್ಞಾನ ಮತ್ತು ಬೌದ್ಧಿಕ ಸಾಮರ್ಥ್ಯದ ವಿಷಯಗಳು (ಎಸ್.ಎಸ್.ಎಲ್.ಸಿ ಮಟ್ಟದ) (ಐ) ಕರ್ನಾಟಕದ ಸಮಾಜಿಕ ಮತ್ತು ಸಾಂಸ್ಕೃತಿಕ ಇತಿಹಾಸದ ವಿಷಯಗಳು. (ಜೆ) ಸ್ವಾತಂತ್ರ್ಯಾ ನಂತರದಲ್ಲಿ ಕರ್ನಾಟಕದ ಭೂ ಸುಧಾರಣೆಗಳು ಮತ್ತು ಸಮಾಜಿಕ ಬದಲಾವಣೆಗಳ ವಿಷಯಗಳು. (ಕೆ) ಕರ್ನಾಟಕದ ಅರ್ಥವ್ಯವಸ್ಥೆ: ಅದರ ಸಾಮರ್ಥ್ಯ ಮತ್ತು ದೌರ್ಬಲ್ಯತೆ: ಪ್ರಸ್ತುತ ಸ್ಥಿತಿಗತಿ ಕುರಿತ ವಿಷಯಗಳು. (ಎಲ್) ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಂಸ್ಥೆಗಳ ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳ ವಿಷಯಗಳು. (ಎಂ) ಕರ್ನಾಟಕ ಪರಿಣಾಮಕಾರಿ ಆಡಳಿತಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನದ ಪಾತ್ರ ಕುರಿತ ವಿಷಯಗಳು. (ಎನ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು (ಓ) ಬೌದ್ಧಿಕ ಸಾಮರ್ಥ್ಯದ ವಿಷಯಗಳು. | 100 | 2 ಗಂಟೆ |
| **ಪತ್ರಿಕೆ–2** | (ಎ) ಸಾಮಾನ್ಯ ಕನ್ನಡ (ಬಿ) ಸಾಮಾನ್ಯ ಇಂಗ್ಲೀಷ್ (ಸಿ) ಕಂಪ್ಯೂಟರ್ ಜ್ಞಾನ | 100 | 2 ಗಂಟೆ |

- ಸ್ಪರ್ಧಾತ್ಮಕ ಪರೀಕ್ಷೆಗೆ ವಿವರವಾದ ವೇಳಾ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಂತರ ಪ್ರಕಟಿಸಲಾಗುವುದು.
- ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್–ಒಎಂಆರ್ ಮಾದರಿ (Offline-OMR type) ಮೂಲಕ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು.
- ಅಭ್ಯರ್ಥಿಯು ಅರ್ಹತೆಗಾಗಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿನ ಒಟ್ಟು ಅಂಕಗಳಲ್ಲಿ ಕನಿಷ್ಠ ಶೇಕಡ 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ.

## 8. ಋಣಾತ್ಮಕ ಮೌಲ್ಯಮಾಪನ (Negative Valuation):–

ಸ್ಪರ್ಧಾತ್ಮಕ ಪರೀಕ್ಷೆ ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದಂಶದಷ್ಟು (¼) ಅಂಕಗಳನ್ನು ಕಳೆಯಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳು ಕನ್ನಡ ಮತ್ತು ಆಂಗ್ಲಭಾಷೆಗಳೆರಡರಲ್ಲೂ ಇರುತ್ತವೆ. ಕನ್ನಡ ಭಾಷೆಯಲ್ಲಿ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ವ್ಯತ್ಯಾಸ ಕಂಡುಬಂದಲ್ಲಿ ಅಭ್ಯರ್ಥಿಗಳು ಆಂಗ್ಲಭಾಷೆ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮಗಳ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ "http://kea.kar.nic.in" ಲಿಂಕ್‌ನಲ್ಲಿ ಪ್ರಕಟಿಸಲಾಗಿದೆ.

## 9. ಅರ್ಹತಾ ಷರತ್ತುಗಳು–

(ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

(ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

(ಉ) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗ ಅಥವಾ **ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ** ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಊ) ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ **ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ** ನಡೆಸಲಾಗುವ ಪರೀಕ್ಷೆಗಳಿಂದ, ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರು ಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

## 10. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು :–

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:–

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಡಿ'

ಆ) ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಇ'

ಇ) ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಎಫ್'

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು

ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

## 11. <u>ಮಾಜಿ ಸೈನಿಕ</u>

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ 01–04–1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ 21–10–1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

(1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(3) ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವನು

**ಅಥವಾ**

ಇ) ಸ್ವಂತಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆಹೊಂದಿದ ವ್ಯಕ್ತಿ.

**ಅಥವಾ**

ಈ) ತನ್ನ ಸ್ವಂತಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:–

i) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು ಅರ್ಹರಾಗಿರುವುದಿಲ್ಲ.

**ವಿವರಣೆ:**–ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಬೇಕು ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

12. **ಗ್ರಾಮೀಣ ಅಭ್ಯರ್ಥಿ:–**

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06–01–2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೇನೆನಿ 2001 ದಿನಾಂಕ 13–02–2001 ರನ್ವಯ ನಮೂನೆ–2ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

**13 ಕನ್ನಡ ಮಾಧ್ಯಮ ಅಭ್ಯರ್ಥಿ**

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೇನೆನಿ 2001 ದಿನಾಂಕ 24–10–2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

14. **ವಿಕಲ ಚೇತನ ಅಭ್ಯರ್ಥಿ**

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ 03–09–2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ–'ಎ' ಮತ್ತು 'ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು ಮತ್ತು ಸಮೂಹ 'ಸಿ' ಗುಂಪಿನ ಹುದ್ದೆಗಳಿಗೆ ಶೇಕಡ 5 ರಷ್ಟು ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ 19–11–2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18–02–2011ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. (ಈ ಪ್ರಮಾಣಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

15. **ಅನುಚ್ಛೇದ 371 (ಜೆ) ರಂತೆ ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ–ಎ ಯಲ್ಲಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಳ್ಳತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸದರಿ ಮೀಸಲಾತಿಯಡಿ ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

## 16. ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ ಕಲ್ಯಾಣ–ಕರ್ನಾಟಕ (ಹೈದರಾಬಾದ್–ಕರ್ನಾಟಕ) ಮೀಸಲಾತಿ:–

ಸರ್ಕಾರಿ ಸೇವೆಯಲ್ಲಿರುವ ನೌಕರರು ದಿನಾಂಕ 29–01–2014 ರಂದು ಹೊರಡಿಸಲಾದ ಅಧಿಸೂಚನೆ–1 ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ರಲ್ಲಿನ ಅನುಬಂಧ–ಎ ನಲ್ಲಿ ಇರುವಂತೆ ತಮ್ಮ ಸೇವಾ ಪುಸ್ತಕದಲ್ಲಿ ದಿನಾಂಕ 01–01–2013 ಕ್ಕಿಂತ ಮುಂಚಿನ ನಮೂದಿನಲ್ಲಿ ಅವರ ಸ್ವಂತ ಊರು ಅಥವಾ ಸ್ಥಳಕ್ಕೆ ಸಂಬಂಧಿಸಿದಂತೆ ಹೈದರಾಬಾದ್ – ಕರ್ನಾಟಕ ಪ್ರದೇಶದ ಜಿಲ್ಲೆಗಳಾದ ಬೀದರ್, ಗುಲ್ಬರ್ಗ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ಯಾದಗಿರಿ ಕಂದಾಯ ಜಿಲ್ಲೆಯ ಅಡಿಯಲ್ಲಿ ಬರುವಂತಹ ಪ್ರದೇಶದ ನಮೂದು ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳು ಕಛೇರಿ ಮುಖ್ಯಸ್ಥರಿಂದ ದಿ: 29–01–2014ರ ಅಧಿಸೂಚನೆ–1 ರಲ್ಲಿನ ನಿಯಮ 5(2) ರಲ್ಲಿ ನೀಡಲಾದ ಸ್ವಗ್ರಾಮ ಪ್ರಮಾಣ ಪತ್ರವನ್ನು ಆಧರಿಸಿ ಅಂತಹವರ ಅರ್ಜಿಯನ್ನು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗೆದುರಾಗಿ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರದ ನಮೂನೆಯನ್ನು ಅನುಬಂಧ–ಎ ರಲ್ಲಿ ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

ಆಯಾ ಹುದ್ದೆಗಳಿಗೆ ಮೂಲ ದಾಖಲೆಗಳ ಪರಿಶೀಲನೆಯ / ಸಂದರ್ಶನಕ್ಕೆ ದಿನಾಂಕ ನಿಗದಿ ಪಡಿಸಿದಾಗ ಅರ್ಹತಾಪಟ್ಟಿಯನ್ನು ಪ್ರಾಧಿಕಾರದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು. ಈ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟಣೆ ಹಾಗೂ ಟಿಪ್ಪಣಿ ಮೂಲಕ ಮಾಹಿತಿ ನೀಡಲಾಗುವುದು / ಇ–ಮೇಲ್ ಮೂಲಕ ಸಂದೇಶ ನೀಡಲಾಗುವುದು. ಅರ್ಹ ಅಭ್ಯರ್ಥಿಗಳು ಸೂಚನಾ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ನಿಗದಿತ ದಿನಾಂಕ / ಸಮಯಕ್ಕೆ ಮೂಲ ದಾಖಲಾತಿ ಗಳೊಂದಿಗೆ ಪ್ರಾಧಿಕಾರದ ಕಚೇರಿಗೆ ಹಾಜರಾಗತಕ್ಕದ್ದು.

## 17. ಪ್ರಾಧಿಕಾರದೊಡನೆ ಪತ್ರ ವ್ಯವಹಾರ:

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ವಿಳಾಸ ಬದಲಾವಣೆ ಇದ್ದಲ್ಲಿ ಮಾತ್ರ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಪ್ರಾಧಿಕಾರದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಪ್ರಾಧಿಕಾರವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಪ್ರಾಧಿಕಾರವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು. ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಈ ಕೆಳಕಂಡ ಮಾಹಿತಿಗಳು ಒಳಗೊಂಡಿರಬೇಕು.

(i) ಅರ್ಜಿ ಸಂಖ್ಯೆ & ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

**18. ಪ್ರಮುಖವಾದ ಸೂಚನೆಗಳು:–** ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ಲ್ಲಿ ಸಹಿಯನ್ನು ನಿಗದಿಪಡಿಸಿದ ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು UPLOAD ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ON-LINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ

ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣಪತ್ರದ ಹಾಗೂ ಇತರೇ ಪ್ರಮಾಣಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಹೈದ್ರಾಬಾದ್-ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣಪತ್ರಗಳನ್ನು ಹೊರತುಪಡಿಸಿ ಇತರೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

1) ಆಧಾರ್‌ಕಾರ್ಡ್
2) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ/ ವಿದ್ಯಾರ್ಹತೆಯ ಎಲ್ಲಾ ವಿಷಯಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರ /ಪಿಡಿಸಿ.
3) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ ಶಾಲೆಯ ವರ್ಗಾವಣೆ ಪ್ರಮಾಣ ಪತ್ರ/ ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
4) ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ /ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ/ ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
5) ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿಕೋರಿದ್ದಲ್ಲಿ)
6) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು) (ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1/ಪ್ರವರ್ಗ-2ಎ/ಪ್ರವರ್ಗ-2ಬಿ/ಪ್ರವರ್ಗ-3ಎ/ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)
7) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿಕೋರಿದ್ದಲ್ಲಿ) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8) ತಹಸೀಲ್ದಾರ್ ನಿಂದ ಪಡೆದ ವಿಧವಾ ಪ್ರಮಾಣ ಪತ್ರ (ವಯೋಮಿತಿಯಲ್ಲಿ ಸಡಿಲಿಕೆ ಕೋರಿದ್ದಲ್ಲಿ)
9) ಸೇವಾನುಭವ ಪ್ರಮಾಣ ಪತ್ರಗಳು (ನಿಗದಿಪಡಿಸಿದ್ದಲ್ಲಿ)
10) ಹೈದರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ-ಪ್ರಮಾಣ ಪತ್ರವನ್ನು ಕೊನೆಯ ದಿನಾಂಕದೊಳಗೆ ಪಡೆಯದೇ ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಸಲ್ಲಿಸಿದ್ದರೂ ಪರಿಗಣಿಸಲಾಗುವುದು.)
11) ಸ್ವಗ್ರಾಮ ಪ್ರಮಾಣ ಪತ್ರ (ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಹೈದರಾಬಾದ್-ಕರ್ನಾಟಕ ಮೀಸಲಾತಿ ಕೋರಿದ್ದಲ್ಲಿ)

**19. ವಿಶೇಷ ಸೂಚನೆಗಳು:-**

(1) ಅಭ್ಯರ್ಥಿಗಳು ON LINE ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು.

(2) ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ನಿಗದಿತ ನಮೂನೆಯಲ್ಲಿ ಅನುಮತಿಯನ್ನು / ಸೇವಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು. ಮೂಲ ದಾಖಲಾತಿಯ ಪರಿಶೀಲನೆಯ ಸಮಯದಲ್ಲಿ ಮೂಲ ನಿರಾಕ್ಷೇಪಣೆ/ ಸೇವಾ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು (ಕ್ರೋಢೀಕೃತ ನಿರಾಕ್ಷೇಪಣೆ ಪ್ರಮಾಣ ಪತ್ರ ಪಡೆದಂತ ಅಭ್ಯರ್ಥಿಗಳು ಈ ಎನ್.ಒ.ಸಿ ರಲ್ಲಿ ಅವರ ನೇಮಕಾತಿ ಪ್ರಾಧಿಕಾರದ ದೃಢೀಕರಣ ಮತ್ತು ಮೊಹರು ಪಡೆದುಕೊಂಡು ಸಲ್ಲಿಸಬೇಕು). ತಪ್ಪಿದ್ದಲ್ಲಿ ಅನರ್ಹಗೊಳಿಸಲಾಗುವುದು.

(3) ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು.

**20. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:** ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ: **080–23460460.**

**21. ದುರ್ನಡತೆ:–** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು / ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**22. ಗಮನಿಸಿ:**

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 / ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 (ತಿದ್ದುಪಡಿಗಳು) – ರಲ್ಲಿರುವಂತೆ ಅನ್ವಯಿಸುತ್ತದೆ.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–

| | | |
|---|---|---|
| ಸಾ.ಅ | ಸಾಮಾನ್ಯಅರ್ಹತೆ | GM - General Merit |
| ಪ.ಜಾ | ಪರಿಶಿಷ್ಟ ಜಾತಿ | SC- Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST -Scheduled Tribe |
| ಪ್ರ–1 | ಪ್ರವರ್ಗ–1 | Cat–1, Category–1 |
| 2ಎ | ಪ್ರವರ್ಗ–2ಎ | 2A Category – 2A |
| 2ಬಿ | ಪ್ರವರ್ಗ–2ಬಿ | 2B Category – 2B |
| 3ಎ | ಪ್ರವರ್ಗ–3ಎ | 3A Category – 3A |
| 3ಬಿ | ಪ್ರವರ್ಗ–3ಬಿ | 3B Category – 3B |
| ಮಾ.ಸೈ | ಮಾಜಿ ಸೈನಿಕ | Ex-Service men |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural- Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS- Kannada Medium Student |
| ಅಂ.ವಿ. | ಅಂಗವಿಕಲ | PH-Physically Handicapped Person |
| ಕ.ಕ. | ಕಲ್ಯಾಣ–ಕರ್ನಾಟಕ | KK-Kalyana Karnataka |
| ಉ.ಮೂ.ವೃ | ಉಳಿದ ಮೂಲ ವೃಂದ | RPC-Residual Parent Cadre |
| ತೃ.ಲಿ | ತೃತೀಯ ಲಿಂಗ | TG-Transgender |
| ಯೋ.ಅ | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP- Project Displaced Person |

ಸಹಿ/–
ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ

**ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಡಿ** (ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

.......................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ............................................ ಜಿಲ್ಲೆಯ / ವಿಭಾಗದ ............................................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ............................................. ಎಂಬುವವರ ಮಗ /ಮಗಳಾದ ಶ್ರೀ / ಶ್ರೀಮತಿ ............................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ /ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

◆ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
◆ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951
(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)
◆ಸಂವಿಧಾನ
◆ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
◆ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
◆ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
◆ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
◆ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತಜಾತಿ/ಬುಡಕಟ್ಟುಗಳ ಆದೇಶ 1988
◆ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ..........................................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ .......................................................... ಜಿಲ್ಲಾ / ವಿಭಾಗದ ........................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ........................................................
ತಹಶೀಲ್ದಾರ್..........................................

ಸ್ಥಳ: ಪದನಾಮ
ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

**ಸೂಚನೆ:** ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ. ಭಾರತ ಸರ್ಕಾರದ ಪತ್ರಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ** (ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

ಗ್ರಾಮ / ಪಟ್ಟಣದ /

ನಗರ ನಿವಾಸಿಯಾದ ಶ್ರೀ / ಶ್ರೀಮತಿ

ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ

ಇವರು ಹಿಂದುಳಿದ ವರ್ಗಗಳ (ಪ್ರವರ್ಗ)

ಜಾತಿಯ ಉಪ ಜಾತಿಗೆ

ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್

ದಿನಾಂಕ: ತಾಲ್ಲೂಕು

ಕಛೇರಿಯ ಮೊಹರು

**ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್** (ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ಇವರ ಮಗ /ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು; ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.11400–21600/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

**ಅಥವಾ**

ಆತನ /ಅಕೆಯ ತಂದೆತಾಯಿ/ ಪೋಷಕರು /ಪತ್ನಿ /ಪತಿಯ ಆದಾಯವು 8 ಲಕ್ಷ ರೂಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರದ ಆದೇಶ ಸಂಖ್ಯೆ: ಹಿಂವಕ/ 304 / ಬಿಸಿಎ / 2017 ದಿನಾಂಕ. 14.09.2018);

**ಅಥವಾ**

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ––– / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಶ್ರೀ/ಶ್ರೀಮತಿ/ಕುಮಾರಿ ಇವರು ಜಾತಿಗೆ ಸೇರಿದ ಉಪ ಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ: –––– (ರೂ: ಮಾತ್ರ) ಎಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್

ದಿನಾಂಕ: –––––––––– ತಾಲ್ಲೂಕು

ಕಛೇರಿಯ ಮೊಹರು

**ನಮೂನೆ – 1**

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು

ತಾಲ್ಲೂಕು

ಜಿಲ್ಲೆ

ಮಾನ್ಯರೇ

ಶ್ರೀ / ಶ್ರೀಮತಿ ಎಂಬುವವರ ಮಗ / ಮಗಳು /

ಪತಿ / ಪತ್ನಿ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :

2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ: ತಾಲ್ಲೂಕು: ಜಿಲ್ಲೆ:

3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ:

4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರು ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:

(ಉದ್ಯೋಗವು ಸರ್ಕಾರಿ / ಅರೆ ಸರ್ಕಾರಿ / ಸಾರ್ವಜನಿಕ ಉದ್ಯಮ / ಖಾಸಗಿ)

5. ಅಭ್ಯರ್ಥಿಯ ಪ್ರಸ್ತುತ ವಿಳಾಸ:

(ಸಂಕ್ಷಿಪ್ತವಾಗಿ ನಮೂದಿಸುವುದು)

6. ಅಭ್ಯರ್ಥಿಯ ಖಾಯಂ ವಿಳಾಸ:

7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು ಪ್ರಾಥಮಿಕ ಮಾಧ್ಯಮಿಕ ಪ್ರೌಢ

8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರು (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:

1) ವೇತನ ಶ್ರೇಣಿ

2) ಜಮೀನಿನ ವಿವರ

3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?

10. ಸಂಪತ್ತು ತೆರಿಗೆ ಪಾವತಿದಾರರೇ?

11. ಮಾರಾಟ ತೆರಿಗೆ ಪಾವತಿದಾರರೇ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರ ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1) 2)

(ಪೂರ್ಣ ವಿಳಾಸದೊಂದಿಗೆ)

## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ಎಂಬುವವರು ಕರ್ನಾಟಕ ರಾಜ್ಯದ ಜಿಲ್ಲೆಯ ವಿಭಾಗ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.
2. ಶ್ರೀ/ಶ್ರೀಮತಿ/ಕುಮಾರಿ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ ತಹಶೀಲ್ದಾರ್.

ತಾಲ್ಲೂಕು,

ಕಛೇರಿಯ ಮೊಹರು

ಸೂಚನೆ–1: ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರವನ್ನು ನೀಡತಕ್ಕದ್ದು

## ನಮೂನೆ – 2
## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ ಮಗಳು/ ಪತಿ/ ಪತ್ನಿ/

ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು

ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ

ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ

ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿಗದಿಪಡಿಸಿ ಒಂದು ದೊಡ್ಡ ನಗರಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು ಸಹಿ

ಕ್ಷೇತ್ರ ಶಿಕ್ಷಣ ಅಧಿಕಾರಿ ಮುಖ್ಯೋಪಾಧ್ಯಾಯರ ಸಹಿ

ಕಛೇರಿಯ ಮೊಹರು ಮತ್ತು ಸಂಸ್ಥೆಯ ಮೊಹರು

ಸ್ಥಳ:
ದಿನಾಂಕ:

---

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ / ಮಗಳು / ಪತಿ / ಪತ್ನಿ / ಶ್ರೀಮತಿ / ಕುಮಾರಿ

ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ

ವಾಸವಾಗಿರುವ ಇವರು ನೇ ತರಗತಿಯಿಂದ ನೇ ತರಗತಿಯವರೆಗೆ

ಶೈಕ್ಷಣಿಕ ವರ್ಷದಿಂದ ಶೈಕ್ಷಣಿಕ ವರ್ಷದವರೆಗೆ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ದಿನಾಂಕ: ಮುಖ್ಯೋಪಾಧ್ಯಾಯರ
ಸಹಿ ಮತ್ತು ಸಂಸ್ಥೆಯ ಮೊಹರು

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇನೆನಿ 2001 ದಿನಾಂಕ: 27.07.2001

ನಮೂನೆ – 3

**ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ**

ಶ್ರೀ/ಶ್ರೀಮತಿ ಎಂಬುವವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ / ಶ್ರೀಮತಿ / ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು:ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ಯೋಜನೆಗಾಗಿ ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈಮೂಲಕ ಪ್ರಮಾಣೀಕರಿಸಿದೆ:–

(ಅ) * * ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ––––

(ಆ) * * ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ: ಯೋಜನೆಯಿಂದ ತಾವು ವಾಸಿಸುವ ಮನೆ:

(ಇ) * * ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ––––––––ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ:

(ಈ) * * ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ: ತಹಶೀಲ್ದಾರ್

ದಿನಾಂಕ: ತಾಲ್ಲೂಕು / ಕಛೇರಿಯ ಮೊಹರು

---

GOVERNMENT OF KARNATAKA

DEPARTMENT OF SAINIK WELFARE AND RESETTLEMENT

Office of the Deputy Director

Department of Sainik Welfare & Resettlement

(Karnataka)

No. Date:

CERTIFICATE

This is to certify that Shri/Smt/Kum..................................................is an applicant for ................................in Karnataka is the spouse / son / daughter of No...................... Rank........... Name ....................................................... who died / was permanently disabled while in service according to the certificate issued by Defense Authority. He died / was permanently disabled on .....................

Home address of the individual at the time of joining Defense Service as per the records is:

...................................................................

.......................................................................

Place: Signature of the Deputy Director

Date: Department of Sainik Welfare & Resettlement

District .....................................

**ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005**

# CERTIFICATE FOR THE PERSONS WITH DISABILITIES

This is to certify that Sri / Smt / Kum ………………………………………………… son / wife / daughter of Shri ………………………………………….. ……………………. Age ……………………….. old, male / female, Registration No …………………………… is a case of

……………………….. He / She is physically disabled/visual disabled/speech & hearing disabled and has …………………….. % (……………………percent) permanent (physical impairment visual impairment speech & hearing impairment) in relation to his / her ……………………………

Note:

1. This condition is progressive / non-progressive / likely to improve / not likely to improve. *

2. Re-assessment is not recommended/is recommended after a period of ………………… months / years. *

* Strike out which is not applicable

(Recent Attested Photograph showing the disability affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the

Medical Superintendent CMO / Head of Hospital (with seal)

Signature / Thumb impression

of the disabled person

Explanation:-As per Notification No. DPAR 50 SRR 2000 dated 03-09-2005 “ Physically Handicapped candidates “or “ person with disability ” means a person suffering from not less than forty percent of any of the followingdisabilities :- (1) Blindness (2) Low Vision (3) Hearing impairment (4) Locomotor disability (5) Leprosy cured(6) Mental retardation (7) Mental illness.

(1) Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;

(2) Person with low vision means aperson with impairment of visual functioning even after treatment or standard refractive correction, but who uses or ispotentially capable of using vision for the planning or execution of a task with appropriate assistive device;

(3) Hearing impairment means loss of sixty decibels or more in the better ear in the conversational range of frequencies.

(4) Locomotor disability means disability of the bones, joints or muscles leading to substantial restriction of the movement of the limbs or any form of cerebral palsy.

(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & pares is in the eye & eyelid, but with no manifest deformity;(ii)manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion " Leprosy cured " shall be construed accordingly;

(6) Mental Retardation:-means a condition of arrested or incomplete development of mind of a person who is specially characterised by sub normality of intelligence;

(7) Mental Illness:- means any mental disorderother than mental retardation.

**ಅನುಬಂಧ–ಎ**

**ಅರ್ಹತಾ ಪ್ರಮಾಣ ಪತ್ರ**

**[ಅನುಚ್ಛೇಧ 371(ಜೆ)ಮೇರೆಗೆ]**

[3(3)ನೇ ನಿಯಮ ನೋಡಿ]

[ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013]

ಶ್ರೀ / ಶ್ರೀಮತಿ ________________________________ ರವರು ________________________________

ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ____________________ ಜಿಲ್ಲೆಯ

____________________ ತಾಲ್ಲೂಕಿನ ________________________________ ಗ್ರಾಮ / ಪಟ್ಟಣದ

ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: _________________________

ದಿನಾಂಕ: ______________________ ಹೆಸರು ___________________________________

ಅಸಿಸ್ಟೆಂಟ್ ಕಮಿಷನರ್

____________________ ಉಪವಿಭಾಗ

____________________ ಜಿಲ್ಲೆ

**ಅನುಬಂಧ–ಎ**

**ಸ್ವಗ್ರಾಮ ಪ್ರಮಾಣ ಪತ್ರ**

(ಅನುಚ್ಛೇಧ 371 (ಜೆ) ಮೇರೆಗೆ)

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಹೈದ್ರಾಬಾದ್ – ಕರ್ನಾಟಕ ಮೀಸಲಾತಿಗೆ ಸಲ್ಲಿಸಬೇಕಾದ ಪ್ರಮಾಣ ಪತ್ರದ ದಿನಾಂಕ 29–01–2014ರ ಅಧಿಸೂಚನೆ–1 ರಲ್ಲಿನ (5 (2) ನೇ ನಿಯಮ ನೋಡಿ)

(ಪ್ರಮಾಣ ಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)

ಶ್ರೀ / ಶ್ರೀಮತಿ ______________________________ ರವರು ______________________________ ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ _______________ ಜಿಲ್ಲೆಯ ___________________.___________________ ತಾಲ್ಲೂಕಿನ ____________________ ಗ್ರಾಮ / ಪಟ್ಟಣವನ್ನು ತನ್ನ ಸೇವಾ ಪುಸ್ತಕದಲ್ಲಿ ತನ್ನ ಸ್ವಗ್ರಾಮ /ಸ್ಥಳ ಎಂದು ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶೀಲಿಸಿದ್ದೇನೆ ಮತ್ತು ಮೇಲಿನ ನಮೂದು 01–01–2013 ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ಇತ್ತೆಂದು ಸ್ವತ: ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ: _______________________ ಹೆಸರು ________________________________

ದಿನಾಂಕ: ____________________ ಪದನಾಮ ______________________________

ಕಛೇರಿ __________________________________

ಇಲಾಖೆ __________________________________